**ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಧಾನ ಪ್ರ.ದ.ನ್ಯಾ.ದಂ.ರವರ ನ್ಯಾಯಾಲಯದಲ್ಲಿ, ತರೀಕೆರೆ.**

**ಸಿ.ಸಿ.1246/2023**

**ಪಿರ್ಯಾದುದಾರರು** ಃ ತರೀಕೆರೆ ಪೊಲೀಸ್

**-ವಿರುದ್ಧ-**

**ಆರೋಪಿ/ತರು** ಃ ಗಂಗಾಧರ್

**-ಃದೋಷಾರೋಪಣೆಃ-**

**ಶ್ರೀ ವೈದ್ಯ ಶ್ರೀಕಾಂತ್,** ಬಿ.ಎಸ್ಸಿ, ಎಲ್.ಎಲ್.ಬಿ., ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಧಾನ ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳು, ತರೀಕೆರೆ ಆದ ನಾನು ಈ ಕೆಳಗೆ ಕಾಣಿಸಿರುವಃ

ಗಂಗಾಧರ್ ಬಿನ್ ಯಲ್ಲಪ್ಪ, 45 ವರ್ಷ, ಕೂಲಿ,
ವಾಸಃಹಳಿಯೂರು ಗ್ರಾಮ, ತರೀಕೆರೆ ತಾಃ

ಆದ ನಿಮ್ಮ ವಿರುದ್ಧ ಈ ಕೆಳಗಿನಂತೆ ಹೊರಿಸಿರುವ ದೋಷಾರೋಪಣೆ ಎಂದರೆಃ

ದಿನಾಂಕಃ20.09.2022 ರಂದು ಸಂಜೆ 5-30 ರ ಸಮಯದಲ್ಲಿ ತರೀಕೆರೆ ಪೊಲೀಸ್ ಠಾಣಾ ಸರಹದ್ದಿನ ಹಳಿಯೂರು ಗ್ರಾಮದ ಆರೋಪಿಯಾದ ನೀವು ನಿಮ್ಮ ಮನೆಯ ಪಕ್ಕದಲ್ಲಿ ಕಾನೂನು ಬಾಹಿರವಾಗಿ ಯಾವುದೇ ಪರವಾನಗಿ ಇಲ್ಲದೇ ಬಿಳಿ ಪ್ಲಾಸ್ಟಿಕ್ ಚೀಲದಲ್ಲಿ 90 ಎಂ ಎಲ್ ನ ಮದ್ಯ ತುಂಬಿದ 23 ಒರಿಜಿನಲ್ ಚಾಯ್ಸ್ ಹೆಸರಿನ ಟೆಟ್ರಾ ಪ್ಯಾಕ್ ಗಳನ್ನು ಮತ್ತು 90 ಎಂ ಎಲ್ ನ ಮದ್ಯ ತುಂಬಿದ ಹೈವೇ ಡಿಲಕ್ಸ್ ವಿಸ್ಕಿ ಹೆಸರಿನ 7 ಟೆಟ್ರಾ ಪ್ಯಾಕ್ ಗಳನ್ನು ಹೊಂದಿ, ಆ ಮೂಲಕ ನೀವು **ಕರ್ನಾಟಕ ಅಬಕಾರಿ ಕಾಯ್ದೆ ಕಲಂ.32** ರ ರೀತ್ಯಾ ಅಪರಾಧಗಳನ್ನು ಈ ನ್ಯಾಯಾಲಯದ ಸಂಜ್ಞಾನದಲ್ಲಿ ಮಾಡಿರುತ್ತೀರಿ.

ಅದೇ ದಿನ, ಅದೇ ಸಮಯ, ಸ್ಥಳ ಹಾಗೂ ವಿಚಾರದಲ್ಲಿ ಆರೋಪಿಯಾದ ನೀವು ಬಿಳಿ ಪ್ಲಾಸ್ಟಿಕ್ ಚೀಲದಲ್ಲಿ 90 ಎಂ ಎಲ್ ನ ಮದ್ಯ ತುಂಬಿದ 23 ಒರಿಜಿನಲ್ ಚಾಯ್ಸ್ ಹೆಸರಿನ ಟೆಟ್ರಾ ಪ್ಯಾಕ್ ಗಳನ್ನು ಮತ್ತು 90 ಎಂ ಎಲ್ ನ ಮದ್ಯ ತುಂಬಿದ ಹೈವೇ ಡಿಲಕ್ಸ್ ವಿಸ್ಕಿ ಹೆಸರಿನ 7 ಟೆಟ್ರಾ ಪ್ಯಾಕ್‌ಗಳನ್ನು ಅಕ್ರಮವಾಗಿ ಇಟ್ಟುಕೊಂಡು ಲಾಭಕ್ಕಾಗಿ

ಮಾರಾಟ ಮಾಡುತ್ತಿದ್ದು, ಆ ಮೂಲಕ ನೀವು **ಕರ್ನಾಟಕ ಅಬಕಾರಿ ಕಾಯ್ದೆ ಕಲಂ.34** ರ ರೀತ್ಯಾ ಅಪರಾಧಗಳನ್ನು ಈ ನ್ಯಾಯಾಲಯದ ಸಂಜ್ಞಾನದಲ್ಲಿ ಮಾಡಿರುತ್ತೀರಿ.

ಮೇಲೆ ಹೇಳಿದ ದಿನಾಂಕ, ಸಮಯ, ಸ್ಥಳ ಹಾಗೂ ಸಂದರ್ಭಗಳಂದು ಆರೋಪಿಯಾದ ನೀವು ಬಿಳಿ ಪ್ಲಾಸ್ಟಿಕ್ ಚೀಲದಲ್ಲಿ 90 ಎಂ ಎಲ್ ನ ಮದ್ಯ ತುಂಬಿದ 23 ಒರಿಜಿನಲ್ ಚಾಯ್ಸ್ ಹೆಸರಿನ ಟೆಟ್ರಾ ಪ್ಯಾಕ್ ಗಳನ್ನು ಮತ್ತು 90 ಎಂ ಎಲ್ ನ ಮದ್ಯ ತುಂಬಿದ ಹೈವೇ ಡಿಲಕ್ಸ್ ವಿಸ್ಕಿ ಹೆಸರಿನ 7 ಟೆಟ್ರಾ ಪ್ಯಾಕ್‌ಗಳು ಅದು ಮಾನವನ ಆರೋಗ್ಯಕ್ಕೆ ಹಾನಿಕರವೆಂದು ಗೊತ್ತಿದ್ದರೂ ಕೂಡಾ ವಶದಲ್ಲಿಟ್ಟುಕೊಂಡು ಲಾಭಕ್ಕಾಗಿ ಸಾರ್ವಜನಿಕರಿಗೆ ಮಾರಾಟ ಮಾಡುತ್ತಿದ್ದು, ಆ ಮೂಲಕ ನೀವು **ಭಾ.ದಂ.ಸಂ. ಕಲಂ.273** ರ ರೀತ್ಯಾ ಅಪರಾಧಗಳನ್ನು ಈ ನ್ಯಾಯಾಲಯದ ಸಂಜ್ಞಾನದಲ್ಲಿ ಮಾಡಿರುತ್ತೀರಿ.

ಈ ಆರೋಪಗಳ ಮೇಲೆ ನೀವು ಈ ನ್ಯಾಯಾಲಯದ ಆರೋಪ ವಿಚಾರಣೆಗೆ ಗುರಿಯಾಗತಕ್ಕದ್ದೆಂದು ನಾನು ಈ ಮೂಲಕ ನಿರ್ದೇಶಿಸುತ್ತೇನೆ.

ದಿನಾಂಕಃ

Sd/-
**(ವೈದ್ಯ ಶ್ರೀಕಾಂತ್)**
ಹಿ. ಪ್ರಧಾನ ಪ್ರದನ್ಯಾದಂ, ತರೀಕೆರೆ.

ಪ್ರಃ 1)ನಿಮಗೆ ತಿಳಿಯುವಂತಹ ಭಾಷೆಯಲ್ಲಿ ಓದಿ ಹೇಳಲಾದ ಆರೋಪಣೆಯನ್ನು ನೀವು ಕೇಳಿ ತಿಳಿದುಕೊಂಡಿರುವಿರಾ?
ಉಃ

ಪ್ರಃ 2)ಸದರಿ ಆರೋಪಣೆಗಳನ್ನು ನೀವು ಒಪ್ಪಿಕೊಳ್ಳುತ್ತೀರಾ ಅಥವಾ ನಿರಾಕರಿಸುತ್ತೀರಾ?
ಉಃ

(ಆರೋಪವನ್ನು ಆರೋಪಿತರಿಗೆ ಓದಿ ಹೇಳಿ ಅವರು ಕೊಟ್ಟ ಉತ್ತರವನ್ನು ನಾನೇ ಸ್ವತಃ ಬರೆದುಕೊಂಡಿರುವುದು ನಿಜ ಮತ್ತು ಸತ್ಯವಾಗಿದೆ ಎಂದು ಈ ಮೂಲಕ ದೃಢೀಕರಿಸುತ್ತೇನೆ)
ದಿನಾಂಕಃ

Sd/-
ಹಿ. ಪ್ರಧಾನ ಪ್ರ.ದ.ನ್ಯಾ.ದಂ ತರೀಕೆರೆ.

ಆರೋಪಿ/ತರ ಸಹಿಃ